# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ: 07ನೇ ಫೆಬ್ರವರಿ, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.)

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

**ಅ)** "2017ನೇ ಫೆಬ್ರವರಿ, 06ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಶ್ರೀ ಶರಣಪ್ಪ ಮಟ್ಟೂರ** ಅವರು ಸೂಚಿಸುವುದು;

**ಆ) ಶ್ರೀ ಆರ್. ಪ್ರಸನ್ನ ಕುಮಾರ್** ಅವರು ಅನುಮೋದಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

.

**ಅ) ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ** ಅವರು ದೊಡ್ಡ ನಗರಗಳಲ್ಲಿ ಘನತ್ಯಾಜ್ಯದಿಂದ ವಿದ್ಯುತ್ ಉತ್ಪಾದನೆ ಮಾಡುವುದರ ಮೂಲಕ ಕಸ ವಿಲೇವಾರಿ ಸಮಸ್ಯೆಯನ್ನು ಬಗೆಹರಿಸುವ ಕುರಿತು **ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರ ಗಮನ ಸೆಳೆಯುವುದು.**

**ಆ) ಶ್ರೀ ಕೆ.ಸಿ.ಕೊಂಡಯ್ಯ** ಅವರು ಸರ್ಕಾರವು ಇತ್ತೀಚೆಗೆ ಹೊರಡಿಸಿರುವ ಸುತ್ತೋಲೆ ಹಾಗೂ ಆದೇಶಗಳಿಂದ ಸರ್ಕಾರಿ ಕಟ್ಟಡ, ರಸ್ತೆ ಕಾಮಗಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಅಗತ್ಯವಾಗಿರುವ ಮರಳು, ಜಲ್ಲಿ ಲಭಿಸದೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಗಮನ ಸೆಳೆಯುವುದು.**

## 05. ನಿಯಮ 330ರ ಮೇರೆಗೆ

**ಅ) ಶ್ರೀ ಪುಟ್ಟಣ್ಣ** ಅವರು ಸರ್ಕಾರಿ ಆಸ್ಪತ್ರೆಗಳಲ್ಲಿ ನುರಿತ ವೈದ್ಯರ ಕೊರತೆ ಹಾಗೂ ವೈದ್ಯಕೀಯ ಕಾಲೇಜುಗಳಲ್ಲಿ ಹಿರಿಯ ವೈದ್ಯರುಗಳ ಕೊರತೆಯನ್ನು ಎದುರಿಸುತ್ತಿದ್ದು, ಈ ಸಮಸ್ಯೆ ನಿವಾರಣೆಗಾಗಿ ವೈದ್ಯರುಗಳ ನಿವೃತ್ತಿ ವಯಸ್ಸನ್ನು 65 ವರ್ಷಗಳಿಗೆ ಹೆಚ್ಚಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು)**

**ಆ) ಶ್ರೀ ಅಮರನಾಥ ಪಾಟೀಲ್** ಅವರು ಶಿಕ್ಷಣ ಇಲಾಖೆಯ ಕರ್ನಾಟಕ ದರ್ಶನ ಯೋಜನೆಯಡಿಯಲ್ಲಿ ವಿದ್ಯಾರ್ಥಿಗಳನ್ನು ವಿವಿಧ ಪ್ರವಾಸಿ ತಾಣಗಳಿಗೆ ಕರೆದೊಯ್ಯಲು ಹಾಗೂ ಪ್ರತಿ ವಿದ್ಯಾರ್ಥಿಗೆ ರೂ.3500/-ಗಳನ್ನು ಖರ್ಚು ಮಾಡಲು ಸರ್ಕಾರ ಒದಗಿಸುವ ಅನುದಾನವನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kar.nic.in/kla**